ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಆರನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 24ನೇ ಮಾರ್ಚ್, 2020

(ಸಮಯ: ಬೆಳಿಗ್ಗೆ 10.00 ಗಂಟೆಗೆ)

----

1. ಉಪ ಸಭಾಧ್ಯಕ್ಷರ ಚುನಾವಣೆ

ಅ) **ಶ್ರೀ ಆನಂದ ಅಲಿಯಾಸ್ ವಿಶ್ವನಾಥ್ ಚಂದ್ರಶೇಖರ ಮಾಮನಿ** ಅವರನ್ನು ವಿಧಾನಸಭೆಯ **"ಉಪ ಸಭಾಧ್ಯಕ್ಷ"** ರನ್ನಾಗಿ ಚುನಾಯಿಸಬೇಕೆಂದು **ಶ್ರೀ ಬಿ.ಎಸ್. ಯಡಿಯೂರಪ್ಪ,** ಮಾನ್ಯ ಮುಖ್ಯಮಂತ್ರಿಗಳು ಅವರು ಸೂಚಿಸುವುದು.

ಆ) **ಶ್ರೀ ಗೋವಿಂದ ಎಂ. ಕಾರಜೋಳ,** ಮಾನ್ಯ ಉಪ ಮುಖ್ಯಮಂತ್ರಿಗಳು ಅವರು ಅನುಮೋದಿಸುವುದು.

2. ವರದಿಯನ್ನೊಪ್ಪಿಸುವುದು

ಶ್ರೀ ಎಂ.ಪಿ. ಅಪ್ಪಚ್ಚು (ರಂಜನ್) (ಸದಸ್ಯರು, ಅರ್ಜಿಗಳ ಸಮಿತಿ) ಅವರು 2018-19ನೇ ಸಾಲಿನ ಕರ್ನಾಟಕ ವಿಧಾನಸಭೆಯ ಅರ್ಜಿಗಳ ಸಮಿತಿಯ ಮೊದಲನೇ ವರದಿಯನ್ನೊಪ್ಪಿಸುವುದು.

3. ಅರ್ಜಿಗಳನ್ನೊಪ್ಪಿಸುವುದು

ಶ್ರೀ ಎಂ.ಪಿ. ಅಪ್ಪಚ್ಚು (ರಂಜನ್) (ಸದಸ್ಯರು, ಅರ್ಜಿಗಳ ಸಮಿತಿ) ಅವರು ಈ ಕೆಳಕಂಡ ಅರ್ಜಿಗಳನ್ನು ಒಪ್ಪಿಸುವುದು:

1) ಮೂಡಬಿದರೆ ತಾಲ್ಲೂಕಿನ ತೆಂಕ ಎಕ್ಕಾರು ಗ್ರಾಮದ ವ್ಯಾಪ್ತಿಯಲ್ಲಿ ದೀರ್ಘ ಕಾಲದಿಂದ ಬಾಕಿ ಉಳಿದಿರುವ ಮೂಲಭೂತ ಸೌಕರ್ಯ ಒದಗಿಸುವ ಬಗ್ಗೆ.

2) ಬೆಂಗಳೂರು ಉತ್ತರ ತಾಲ್ಲೂಕು, ಯಲಹಂಕ ಹೋಬಳಿ ಸಂಖ್ಯೆ:1336/72/2ರ ವಿಕಾಸ ಬಡಾವಣೆ, ಪಾಲನಹಳ್ಳಿ, ಮಾರುತಿನಗರ, ಯಲಹಂಕ ರಾಷ್ಟ್ರೀಯ ಹೆದ್ದಾರಿ ಸಮೀಪವಿರುವ ಎಂ.ವಿ.ಎಂ. ಶಿಕ್ಷಣ ಸಂಸ್ಥೆಗೆ ಮಕ್ಕಳು ಹಾಗೂ ಸಾರ್ವಜನಿಕರು ನಡೆದಾಡಲು ಲಿಂಕ್ ರಸ್ತೆಯನ್ನು ನಿರ್ಮಾಣ ಮಾಡುವ ಬಗ್ಗೆ.

3) ಸವದತ್ತಿ ತಾಲ್ಲೂಕಿನ ಯಡಹಳ್ಳಿ ಗ್ರಾಮದ ಸಂಗ್ರೇಶಕೊಪ್ಪ–ಕರಿಕಟ್ಟಿ ರಸ್ತೆಗೆ ಕೂಡುವ ರಸ್ತೆ (ಗೊಚ್ಚಿನ ರಸ್ತೆ) ಯನ್ನು ದುರಸ್ತಿ ಮಾಡುವ ಬಗ್ಗೆ.

4. ವಿತ್ತೀಯ ಕಾರ್ಯಕಲಾಪಗಳು

1) 2020–21ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ

ಹಾಗೂ

1 ರಿಂದ 28 ರವರೆಗಿನ ಅನುದಾನ ಬೇಡಿಕೆಗಳ ಮೇಲೆ ಮುಂದುವರೆದ ಚರ್ಚೆ, ಸರ್ಕಾರದ ಉತ್ತರ ಹಾಗೂ ಮತಕ್ಕೆ ಹಾಕುವುದು

2) 2019–20ನೇ ಸಾಲಿನ ಪೂರಕ ಅಂದಾಜುಗಳ (3ನೇ ಹಾಗೂ ಅಂತಿಮ ಕಂತು) ಮೇಲೆ ಮುಂದುವರೆದ ಚರ್ಚೆ, ಸರ್ಕಾರದ ಉತ್ತರ ಹಾಗೂ ಮತಕ್ಕೆ ಹಾಕುವುದು.

5. ಶಾಸನ ರಚನೆ

I. ವಿಧೇಯಕಗಳನ್ನು ಮಂಡಿಸುವುದು

1. ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) 2020ನೇ ಸಾಲಿನ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2. ಶ್ರೀ ಎಸ್.ಟಿ. ಸೋಮಶೇಖರ್ (ಮಾನ್ಯ ಸಹಕಾರ ಸಚಿವರು) ಅವರು:–

ಅ) 2020ನೇ ಸಾಲಿನ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

... 3/ ..

II. ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

1. **ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–**
   - ಅ) 2020ನೇ ಸಾಲಿನ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
   - ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. **ಶ್ರೀ ಕೆ.ಎಸ್. ಈಶ್ವರಪ್ಪ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) ಅವರು:–**
   - ಅ) 2020ನೇ ಸಾಲಿನ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
   - ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3. **ಶ್ರೀ ಸಿ.ಸಿ. ಪಾಟೀಲ್ (ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು) ಅವರು:–**
   - ಅ) 2020ನೇ ಸಾಲಿನ ಕರ್ನಾಟಕ ಕಲ್ಲುಪುಡಿ ಮಾಡುವ ಘಟಕಗಳ (ಕ್ರಷರ್‌ಗಳ) ನಿಯಂತ್ರಣ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
   - ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4. **ಶ್ರೀ ಜೆ.ಸಿ. ಮಾಧುಸ್ವಾಮಿ (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು) ಅವರು:–**
   - ಅ) 2020ನೇ ಸಾಲಿನ ಕರ್ನಾಟಕ ಕೆಲವು ಅಧಿನಿಯಮಗಳು ಮತ್ತು ಪ್ರಾದೇಶಿಕ ಕಾನೂನುಗಳನ್ನು ನಿರಸನಗೊಳಿಸುವ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
   - ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

5. **ಶ್ರೀ ಆರ್. ಅಶೋಕ (ಮಾನ್ಯ ಕಂದಾಯ ಸಚಿವರು) ಅವರು:–**
   - ಅ) 2020ನೇ ಸಾಲಿನ ಸರ್ವಜ್ಞ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
   - ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

6. **ಶ್ರೀ ಎಸ್.ಟಿ. ಸೋಮಶೇಖರ್ (ಮಾನ್ಯ ಸಹಕಾರ ಸಚಿವರು) ಅವರು:–**
   - ಅ) 2020ನೇ ಸಾಲಿನ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
   - ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

... 4/ ..

6. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹದಿನಾಲ್ಕನೇ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆ:-**

1. ದಿನಾಂಕ: 10.03.2020ರ 4ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ವೆಂಕಟರಾವ್ ನಾಡಗೌಡ ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 46(1055) : ಮಾನ್ಯ ಅಬಕಾರಿ ಸಚಿವರು
2. ದಿನಾಂಕ: 17.03.2020ರ 9ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಪ್ರಿಯಾಂಕ್ ಎಂ. ಖರ್ಗೆ ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 121(1227) : ಮಾನ್ಯ ಗೃಹ ಸಚಿವರು
3. ದಿನಾಂಕ: 17.03.2020ರ 9ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ವೇದವ್ಯಾಸ ಕಾಮತ್ ಡಿ. ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 124(2143) : ಮಾನ್ಯ ಗೃಹ ಸಚಿವರು
4. ದಿನಾಂಕ: 17.03.2020ರ 9ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಮಹದೇವ ಕೆ. ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 125(2110) : ಮಾನ್ಯ ಗೃಹ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹದಿನಾಲ್ಕನೇ ಪಟ್ಟಿ

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)
